ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮಹದೇವಪುರ ವಿಧಾನಸಭಾ ಕ್ಷೇತ್ರದ ಅಲಂಬಿಕ್ ಗ್ಲಾಸ್ ಕಾರ್ಖಾನೆಗೆ ಸರ್ಕಾರದಿಂದ ಭೂಮಿ ಮಂಜೂರು ಮಾಡಿದ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) -

1093 (1154) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಹದೇವಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಲಂಬಿಕ್ ಗ್ಲಾಸ್ ಕಾರ್ಖಾನೆ ನಿರ್ಮಾಣಕ್ಕಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು ಎಕರೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಿದೆ; (ವಿವರ ನೀಡುವುದು)

(ಆ) ಈ ಹಿಂದೆ ಸದರಿ ಕಾರ್ಖಾನೆಯು ತನ್ನ ಕಾರ್ಮಿಕರ ಶ್ರೇಯೋಭಿವೃದ್ಧಿಯ ಪರವಾಗಿ ಕಾರ್ಮಿಕರಿಗೆ ವಾಸಿಸಲು ಮನೆ ಕಟ್ಟಿಕೊಡುವ ಉದ್ದೇಶದ ಸಲುವಾಗಿ ಸರ್ಕಾರದಿಂದ ಭೂಮಿಯನ್ನು ಮಂಜೂರು ಮಾಡಿಸಿಕೊಂಡಿದೆಯೇ; ಮಾಡಿಸಿಕೊಂಡಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

(ಇ) ಕಾರ್ಮಿಕರಿಗೆ ಮನೆ ಕಟ್ಟಿ ಕೊಡುವ ಸಲುವಾಗಿ ಸರ್ಕಾರದಿಂದ ಜಮೀನು ಪಡೆದು ಅನಂತರದಲ್ಲಿ ಬೇರೆ ಉದ್ದೇಶಕ್ಕಾಗಿ ಭೂಮಿಯನ್ನು ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು?